**ಎಂ.ವಿ.ಸಿ. 1223/2022, ಪಿ.ಡಬ್ಲೂ-5 ಹೆಸರುಃ ಮಾರುತಿ**

**ದಿಃ11-02-2026 ರಂದು ಸಾಕ್ಷಿದಾರರು ಹಾಜರಿದ್ದು, ಪ್ರಮಾಣ ವಚನ ಬೋಧಿಸಲಾಯಿತು**

**ಪಾಟೀ ಸವಾಲು : 1 ನೇ ಎದುರುದಾರರ ಪರ ಶ್ರೀ ಎಸ್.ಆರ್. ವಕೀಲರಿಂದಃ**

ನಾನು ಈ ನ್ಯಾಯಾಲಯದಲ್ಲಿ ಅಪಘಾತದ ಕುರಿತು ಪರಿಹಾರವನ್ನು ಕೋರಿ ಪೊಲೀಸ್ ದಾಖಲಾತಿಗಳ ಆಧಾರದಲ್ಲಿ ಸಲ್ಲಿಸಿರುತ್ತೇನೆ ಎಂದರೆ ಸರಿ. ನಿಪಿ.8 ರಂತೆ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣಾಧಿಕಾರಿಗಳು ಈ ಪ್ರಕರಣದ 1 ನೇ ಎದುರುದಾರರ ಚಾಲಕನ ವಿರುದ್ಧ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದರು ಎಂದರೆ ಸರಿ. 1 ನೇ ಎದುರುದಾರರಿಗೆ ಸೇರಿದ ಟ್ರಾಕ್ಟರ್ ಸಂಖ್ಯೆ ಕೆ.ಎ.-17-ಟಿ-2681 ಎಂದರೆ ಸರಿ. ನಾವು ಅಪಘಾತದ ಸಮಯದಲ್ಲಿ ಚಿಕ್ಕಜಾಜೂರಿನಿಂದ ನಾಯಕನಹಟ್ಟಿ ದೇವಸ್ಥಾನಕ್ಕೆ ಟಿ.ಟಿ. ವಾಹನದಲ್ಲಿ ಹೋಗುತ್ತಿದ್ದೆವು. ಟಿ.ಟಿ. ವಾಹನದ ಸಂಖ್ಯೆ ಕೆ.ಎ.-04-ಡಿ-8153 ಆಗಿರುತ್ತದೆ. ಸದರಿ ಟಿ.ಟಿ. ವಾಹನವನ್ನು ಧನುಷ್ ಎಂಬುವವರು ಚಾಲನೆ ಮಾಡುತ್ತಿದ್ದರು. ಟಿ.ಟಿ. ವಾಹನದ ಚಾಲಕ ಸದರಿ ವಾಹನವನ್ನು ಅತೀ ವೇಗವಾಗಿ ಚಾಲನೆ ಮಾಡುತ್ತಿದ್ದನು. ಟಿ.ಟಿ. ವಾಹನದ ಚಾಲಕನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗಿ, ರಸ್ತೆಯ ಎಡಬದಿಯಲ್ಲಿ ನಿಲ್ಲಿಸಿದ್ದ ಟ್ರಾಕ್ಟರ್‌ಗೆ ಡಿಕ್ಕಿಪಡಿಸಿರುತ್ತಾರೆ ಎಂದರೆ ಸರಿ. ಸದರಿ ಪರಿಣಾಮ ನನಗೆ ಅಪಘಾತದಲ್ಲಿ ಗಾಯ ಆಗಿರುತ್ತದೆ ಎಂದರೆ ಸರಿ.

2. ರಸ್ತೆಯ ಎಡಬದಿಯಲ್ಲಿ ನಿಲ್ಲಿಸಿದ್ದ ಟ್ರಾಕ್ಟರ್‌ನ ಒಂದು ಟೈರು ಪಂಚರ್ ಆಗಿದ್ದ ಕಾರಣ ಒಂದು ಚಕ್ರ ಇರಲಿಲ್ಲ ಎಂದರೆ ಸರಿ. ಟ್ರಾಕ್ಟರ್‌ನ ಚಾಲಕ ಟೈರಿಗೆ ಪಂಚರ್‌ನ್ನು ಹಾಕಿಸಿಕೊಂಡು ಬರಲು ಹೋಗಿದ್ದರು ಎಂದರೆ ಸರಿ. ಸದರಿ ಸಮಯದಲ್ಲಿ ಟ್ರಾಕ್ಟರ್‌ನ ಇಂಜಿನ್ ಇರಲಿಲ್ಲ ಎಂದರೆ ಸಾಕ್ಷಿ ಇರಲಿಲ್ಲ ಎಂದು ಹೇಳುತ್ತಾರೆ. ಹಾಗಾಗಿ ಚಿತ್ರಹಳ್ಳಿ ಗೇಟ್ ಪೊಲೀಸರು ಟ್ರಾಕ್ಟರ್‌ನ ಚಾಲಕನ ವಿರುದ್ಧ ಸುಳ್ಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದಾರೆ ಎಂದರೆ ಸಾಕ್ಷಿ ನಾನು ಆಸ್ಪತ್ರೆಯಲ್ಲಿದ್ದಾಗ ಪೊಲೀಸರು ದೂರಿಗೆ ಸಹಿ ಹಾಕಿಸಿಕೊಂಡಿದ್ದು, ಅದರಲ್ಲಿನ ವಿಚಾರಗಳು ಗೊತ್ತಿರಲಿಲ್ಲ ಎಂದು ಹೇಳುತ್ತಾರೆ. ಅಪಘಾತ ಏರ್ಪಟ್ಟಂತಹ ಸ್ಥಳ ಚಿತ್ರದುರ್ಗ - ಶಿವಮೊಗ್ಗ ಎನ್.ಹೆಚ್.13 ರ ರಸ್ತೆ ಎಂದರೆ ಸರಿ. ಸದರಿ ರಸ್ತೆ ಸುಮಾರು 30 ಅಡಿ ಅಗಲ ಇದೆ ಎಂದರೆ ಸರಿ. ಟ್ರೈಲರ್ ರಸ್ತೆಯ 6 ಅಡಿಗಳ ಅಂಚಿನಲ್ಲಿ ಎಡಭಾಗದಲ್ಲಿ ನಿಂತಿತ್ತು ಎಂದರೆ ಸರಿ. ಅಪಘಾತಕ್ಕೆ ಟಿ.ಟಿ. ವಾಹನದ ಚಾಲಕನ ಅತೀ ವೇಗವೇ ಕಾರಣ ಎಂದರೆ ಸರಿ. ಈ ಕುರಿತು ತನಿಖಾಧಿಕಾರಿಗಳು ಸ್ಥಳ ಮಹಜರಿನಲ್ಲಿ ಉಲ್ಲೇಖ ಮಾಡಿರುತ್ತಾರೆ ಎಂದರೆ ಸರಿ. ತನಿಖಾಧಿಕಾರಿಗಳು ನಿಪಿ.7 ರಂತೆ ಸಲ್ಲಿಸಿದ್ದ

ದೋಷಾರೋಪಣ ಪಟ್ಟಿಯ ಕುರಿತು 1 ನೇ ಎದುರುದಾರರ ಚಾಲಕನು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಿದ್ದು, ಸದರಿ ಅರ್ಜಿಯನ್ನು ಪುರಸ್ಕರಿಸಿ 1 ನೇ ಎದುರುದಾರರಿಗೆ ಸಂಬಂಧಿಸಿದಂತೆ ದೋಷಾರೋಪಣ ಪಟ್ಟಿಯನ್ನು ರದ್ದುಪಡಿಸಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಅಪಘಾತವು 2 ನೇ ಎದುರುದಾರರಿಗೆ ಸೇರಿದ ಟಿ.ಟಿ. ವಾಹನದ ಚಾಲಕನ ತಪ್ಪಿನಿಂದ ಏರ್ಪಟ್ಟಿದ್ದು, ಹಾಗಾಗಿ 3 ನೇ ಎದುರುದಾರರು ಪರಿಹಾರವನ್ನು ಪಾವತಿಸಲು ಬಾದ್ಯಸ್ಥರಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲು : 3 ನೇ ಎದುರುದಾರರ ಪರ ಶ್ರೀ ಪಿ.ಎನ್. ವಕೀಲರಿಂದಃ**

3. ನಾನು ಪದವಿ ವ್ಯಾಸಂಗ ಮಾಡಿದ್ದೇನೆ. ಅಪಘಾತದ ಸಮಯದಲ್ಲಿ ನಾವು ಚಿಕ್ಕಜಾಜೂರಿನಿಂದ ನಾಯಕನಹಟ್ಟಿ ದೇವಸ್ಥಾನಕ್ಕೆ ಟೆಂಪೋ ಟ್ರಾವಲರ್‌ನಲ್ಲಿ ಹೋಗುತ್ತಿದ್ದೆವು. ಟೆಂಪೋ ಟ್ರಾವಲರ್‌ನಲ್ಲಿ ಒಟ್ಟು 13 ಜನ ಪ್ರಯಾಣಿಸುತ್ತಿದ್ದೆವು. ನಾವು ನಾಯಕನಹಟ್ಟಿಗೆ ಹೋಗುತ್ತಿದ್ದಾಗ, ರಾತ್ರಿ 7.30 ರ ಸಮಯದಲ್ಲಿ ಶಿವಗಂಗ ಮತ್ತು ಚಿತ್ರಹಳ್ಳಿ ಗ್ರಾಮಗಳ ಮಧ್ಯೆ ತಡವಾಗಿದ್ದು, ಬೇಗ ಹೋಗುವಂತೆ ಹೇಳಿದಾಗ ಟೆಂಪೋ ಟ್ರಾವಲರ್‌ನ ಚಾಲಕ ವಾಹನವನ್ನು ಅತೀ ವೇಗವಾಗಿ ಚಾಲನೆ ಮಾಡಿಕೊಂಡು ಹೋಗಿ ಟ್ರಾಕ್ಟರ್‌ನ ಟ್ರೈಲರ್‌ಗೆ ಗುದ್ದಿರುತ್ತಾರೆ. ಅಪಘಾತದ ನಂತರ ನಮ್ಮನ್ನು ಹೊಳಲ್ಕೆರೆಯ ಸಾರ್ವಜನಿಕ ಆಸ್ಪತ್ರೆಗೆ ಕರೆದುಕೊಂಡು ಬಂದಿರುತ್ತಾರೆ. ನಾವು ಹೊಳಲ್ಕೆರೆಯ ಆಸ್ಪತ್ರೆಯಲ್ಲಿ ಇದ್ದಾಗ, ಚಿತ್ರಹಳ್ಳಿ ಗೇಟ್ ಪೊಲೀಸರು ಆಸ್ಪತ್ರೆಗೆ ಬಂದಿದ್ದರು. ಪೊಲೀಸರು ನನ್ನ ಮತ್ತು ಇತರೆ ಗಾಯಾಳುಗಳ ಹೇಳಿಕೆಗಳನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿ.

4. ಸಾಕ್ಷಿ ನಿಪಿ.1 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಪೊಲೀಸರಿಗೆ ನನ್ನ ಹೆಸರು ಮತ್ತು ವಿಳಾಸದ ಕುರಿತು ನಾನೇ ಮಾಹಿತಿಯನ್ನು ನೀಡಿರುತ್ತೇನೆ. ದೂರಿನಲ್ಲಿ ನಮೂದಿಸಿರುವ ಎಲ್ಲಾ 13 ಗಾಯಾಳುಗಳ ಹೆಸರುಗಳನ್ನು ನಾನು ಹೇಳಿಲ್ಲ. ನನಗೂ ಮತ್ತು ಪೊಲೀಸರಿಗೂ ಯಾವುದೇ ವೈಶಮ್ಯ ಇಲ್ಲ. ಪೊಲೀಸರು ನನ್ನ ಬಳಿ ಒಂದು ದಾಖಲಾತಿಗೆ ಸಹಿ ಪಡೆದಿರುತ್ತಾರೆ. ನನ್ನ ಬಳಿ ಸಹಿ ಪಡೆದುಕೊಂಡ ಪೊಲೀಸರು ಹೆಸರು ಗೊತ್ತಿಲ್ಲ. ನಾನು ಪೊಲೀಸರಿಗೆ ಖಾಲಿ ಹಾಳೆಗೆ ಸಹಿ ಮಾಡಿರುತ್ತೇನೆ. ನಾನು ಪದವಿ ವ್ಯಾಸಂಗ ಮಾಡಿದ್ದು, ಖಾಲಿ ಹಾಳೆಗೆ ಸಹಿ ಮಾಡಬಾರದು ಎಂಬ ಬಗ್ಗೆ ಗೊತ್ತಿದೆ. ನಾನು ಪೊಲಿಸರು ನನ್ನಿಂದ ಖಾಲಿ ಹಾಳೆಗೆ ಸಹಿ ಪಡೆದುಕೊಂಡಿದ್ದಾರೆ ಎಂದು ಅಧೀಕ್ಷಕರು, ಚಿತ್ರದುರ್ಗ ರವರಿಗೆ ಹಾಗೂ ಇತರೆ ಯಾವುದೇ ಪ್ರಾಧಿಕಾರಕ್ಕೆ ಖಾಲಿ ಹಾಳೆಗೆ ಸಹಿ ಪಡೆದುಕೊಂಡ ಪೊಲೀಸರ ವಿರುದ್ಧ ದೂರನ್ನು ನೀಡಿಲ್ಲ. ನಾನು ಸಹಿ ಮಾಡಿದ ಖಾಲಿ ಹಾಳೆಯಲ್ಲಿ ಪೊಲೀಸರು ಏನು ಬರೆದುಕೊಂಡಿದ್ದಾರೆ ಎಂದು ಗೊತ್ತಿಲ್ಲ. ನಾನು ನಿಪಿ.1 ರ ದೂರಿನ ಆಧಾರದಲ್ಲಿ ಈ ಪ್ರಕರಣವನ್ನು ಸಲ್ಲಿಸಿದ್ದೇನೆ.

5. ನಾನು ಈ ಅರ್ಜಿಯನ್ನು ಪರಿಹಾರವನ್ನು ಕೋರಿ ಟೆಂಪೊ ಟ್ರಾವಲರ್ ವಾಹನದ ಮಾಲೀಕರ ವಿರುದ್ಧ ಸಲ್ಲಿಸಿದ್ದೇನೆ. ನಾನು ಈ ಅರ್ಜಿಯಲ್ಲಿ ಟ್ರಾಕ್ಟರ್ ಮತ್ತು ಟ್ರೈಲರ್‌ನ ತಪ್ಪಿನಿಂದ ಅಪಘಾತ ಆಗಿದೆ ಎಂದು ಹೇಳಿಲ್ಲ. ನಾನು ನ್ಯಾಯಾಲಯಕ್ಕೆ ಸಲ್ಲಿಸಿರುವ ಅರ್ಜಿಗೆ ಬೆರಳಚ್ಚು ಮಾಡಿದ ನಂತರ ಸಹಿ ಮಾಡಿರುತ್ತೇನೆ. ಸಾಕ್ಷಿ ತಾನು ಸಲ್ಲಿಸಿರುವ ಅರ್ಜಿಯಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಅರ್ಜಿಯನ್ನು ಸಲ್ಲಿಸಲು ನನ್ನ ವಕೀಲರಿಗೆ ನಾನೇ ಮಾಹಿತಿಯನ್ನು ನೀಡಿರುತ್ತೇನೆ. ನಾನು ಸಲ್ಲಿಸಿರುವ ಅರ್ಜಿಯಲ್ಲಿ 'Tractor Reg. No.KA-17/T-2681 parked in the road which was parked irregularly by the driver of the Tractor without following traffic rules and negligently and caused the accident' ಎಂದು ಹೇಳಿರುತ್ತೇನೆ ಎಂದರೆ ಸರಿ. ನಾನು ಆಸ್ಪತ್ರೆಯಲ್ಲಿ ಸಹಿ ಮಾಡಿದ ನಂತರದಲ್ಲಿ ಪುನಃ ಪೊಲೀಸರ ಬಳಿ ಹೋಗಿಲ್ಲ. ಪೊಲೀಸರು ನನ್ನಿಂದ ಪುನಃ ಯಾವುದೇ ಹೇಳಿಕೆಯನ್ನು ಪಡೆದುಕೊಂಡಿಲ್ಲ. ನಿಪಿ.3 ರ ಸ್ಥಳ ಮಹಜರಿನ ಸಮಯದಲ್ಲಿ ನಾನು ಸ್ಥಳದಲ್ಲಿ ಇರಲಿಲ್ಲ. ಸ್ಥಳದಲ್ಲಿ ಕಚ್ಚಾ ನಕ್ಷೆಯನ್ನು ತಯಾರಿಸುವ ಸಮಯದಲ್ಲಿ ನಾನು ಇರಲಿಲ್ಲ. ಅಪಘಾತವು ಟ್ರಾಕ್ಟರ್ ಮತ್ತು ಟ್ರೈಲರ್‌ನ ಚಾಲಕನು ವಾಹನವನ್ನು ರಸ್ತೆಯ ಮಧ್ಯದಲ್ಲಿ ನಿಲ್ಲಿಸಿದ್ದ ಕಾರಣ ಅಪಘಾತ ಆಗಿರುತ್ತದೆ ಎಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾನು ನೀಡಿದ ಹೇಳಿಕೆಯ ಆಧಾರದಲ್ಲಿ ಹಾಗೂ ಇತರೆ ಗಾಯಾಳುಗಳು ನೀಡಿದ ಹೇಳಿಕೆಗಳ ಆಧಾರದಲ್ಲಿ 1 ನೇ ಎದುರುದಾರರ ಟ್ರಾಕ್ಟರ್‌ನ ಚಾಲಕನ ವಿರುದ್ಧ ತನಿಖಾಧಿಕಾರಿಗಳು ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದರು ಎಂದರೆ ಸರಿಯಲ್ಲ. ಪೊಲೀಸರು ನನ್ನಿಂದ ಯಾವುದೇ ಖಾಲಿ ಹಾಳೆಗೆ ಸಹಿಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ.

6. ಟ್ರಾಕ್ಟರ್ ಮತ್ತು ಟ್ರೈಲರ್‌ಗೆ ವಿಮೆ ಇಲ್ಲ ಎಂಬುದು ಗೊತ್ತಿದೆ ಎಂದರೆ ಸರಿ. ವಿಮೆ ಇಲ್ಲದಿದ್ದಲ್ಲಿ ಮಾಲೀಕರು ಪರಿಹಾರವನ್ನು ಕೊಡಬೇಕು ಎಂದರೆ ಸರಿ. ನಾವು ಹೋಗುತ್ತಿದ್ದ ಟೆಂಪೋ ಟ್ರಾವಲರ್‌ಗೆ ವಿಮೆ ಇದೆ ಎಂಬ ಬಗ್ಗೆ ನನಗೆ ಗೊತ್ತಿಲ್ಲ. ನಾನು ಟೆಂಪೋ ಟ್ರಾವಲ್‌ಗೆ ಸೇರಿದಂತಹ ವಿಮಾ ಕಂಪನಿಯ ವಿರುದ್ಧ ಪರಿಹಾರ ಕೋರಿದ್ದೇನೆ ಎಂದರೆ ಸರಿ. ಟೆಂಪೋ ಟ್ರಾವೆಲ್ ವಾಹನಕ್ಕೆ ವಿಮೆ ಇರುವ ಕಾರಣ ಹಾಗೂ ಟ್ರಾಕ್ಟರ್ ಮತ್ತು ಟ್ರೈಲರ್‌ಗೆ ವಿಮೆ ಇಲ್ಲದ ಕಾರಣ ವಿಮಾ ಕಂಪನಿಯಿಂದ ಪರಿಹಾರವನ್ನು ಪಡೆಯುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.